# ಅಪರ ಸಿವಿಲ್ ನ್ಯಾಯಾಧೀಶರು ಮತ್ತು ಜೆ ಎಂ ಎಫ್ ಸಿ ನ್ಯಾಯಾಲಯ, ದೊಡ್ಡಬಳ್ಳಾಪುರ

## ಸಿ ಸಿ ನಂ : 1207/2017

**ಪಿ ಡಬ್ಲ್ಯೂ - 3**

**ಸಿ ಡಬ್ಲ್ಯೂ - 4**

**ದಿಃ 17.03.2026 ರಂದು ಸಾಕ್ಷಿಯನ್ನು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಹೆಸರು ಃ ಮುತ್ತುರಾಜ್**

**ತಂದೆಯ ಹೆಸರು ಃ ಚಿಕ್ಕಣ್ಣ**

**ವಯಸ್ಸು ಃ 45 ವರ್ಷ**

**ಉದ್ಯೋಗ ಃ ವ್ಯವಸಾಯ**

**ವಿಳಾಸ ಃ ನಾರನಹಳ್ಳಿ, ದೊಡ್ಡಬಳ್ಳಾಪುರ ತಾಲ್ಲೂಕು.**

**ಮುಖ್ಯ ವಿಚಾರಣೆ ಃ ಸ ಸ ಅ ರವರಿಂದ**

ಆರೋಪಿತ ಗೊತ್ತಿಲ್ಲ. ಚಾಸಾ-1 ರವರು ಗೊತ್ತಿಲ್ಲ. ನಾನು ಯಾವುದೇ ಘಟನೆಯನ್ನು ನೋಡಿಲ್ಲ.ಈ ಪ್ರಕರಣದ ಬಗ್ಗೆ ನನಗೆ ಯಾವುದೇ ಮಾಹಿತಿಯಿಲ್ಲ. ನಾನು ಪೋಲೀಸರಿಗೆ ಹೇಳಿಕೆ ಕೊಟ್ಟಿಲ್ಲ.

**( ಈ ಹಂತದಲ್ಲಿ ಸ ಸ ಅ ರವರು ಈ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ಕೇಳಿದ್ದರಿಂದ ಅನುಮತಿ ನೀಡಲಾಯಿತು)**

**ಪಾಟೀ ಸವಾಲುಃ ಸ ಸ ಅ ರವರಿಂದ**

ದಿಃ 05.12.2015 ರಂದು ಮಧ್ಯಾಹ್ನ 3-00 ಗಂಟೆ ಸಮಯದಲ್ಲಿ ದೊಡ್ಡಬಳ್ಳಾಪುರ-ಡಾಬಸ್ ಪೇಟೆ ಎನ್.ಹೆಚ್ 207 ರಸ್ತೆ ಮಧುರನ ಹೊಸಹಳ್ಳಿ ಗೇಟ್ ಬಳಿ ಇರುವ ಹೋಟೇಲ್ ಬಳಿ ನಾನು ಮಾತನಾಡಿಕೊಂಡು ನಿಂತಿದ್ದಾಗ ಅದೇ ಸಮಯದಲ್ಲಿ ರಸ್ತೆಯ ಎಡಭಾಗದಲ್ಲಿನ ಫುಟ್‌ಪಾತ್ ಮೇಲೆ ಚಾಸಾ-1 ರವರು ತಮ್ಮ ಸೀಮೆ ಹಸುವನ್ನು ಮನೆಯ ಕಡೆ ಹೊಡೆದುಕೊಂಡು ಹೋಗುತ್ತಿದ್ದರು ಎಂದರೆ ಸರಿಯಲ್ಲ. ಅದೇ ಸಮಯದಲ್ಲಿ ಡಾಬಸ್ ಪೇಟೆ ಕಡೆಯಿಂದ ಬರುತ್ತಿದ್ದ ಕ್ಯಾಂಟರ್ ಚಾಲಕ ತನ್ನ ವಾಹನವನ್ನು ಅತೀವೇಗ

ಮತ್ತು ಅಜಾಗರೂಕತೆಯಿಂದ ಚಾಲನೆ ಮಾಡಿಕೊಂಡು ಬಂದು ಚಾಸಾ-1 ರವರ ಸೀಮೆ ಹಸುವಿಗೆ ಡಿಕ್ಕಿ ಹೊಡೆಸಿದ ಎಂದರೆ ಸರಿಯಲ್ಲ. ಅದರ ಪರಿಣಾಮ ಹಸು ನೆಲಕ್ಕೆ ಬಿದ್ದು ಹೋಗಿತ್ತು ಎಂದರೆ ಸರಿಯಲ್ಲ. ನಂತರ ನಾನು ಕೂಡಲೇ ಅಲ್ಲಿಗೆ ಹೋಗಿ ನೋಡಿದಾಗ ಹಸುವಿನ ತಲೆಗೆ ಮತ್ತು ಹೊಟ್ಟೆಗೆ ತೀರ್ವ ಸ್ವರೂಪದ ಗಾಯಗಳಾಗಿ ಸ್ಥಳದಲ್ಲಿಯೇ ಸತ್ತು ಹೋಗಿತ್ತು ಎಂದರೆ ಸರಿಯಲ್ಲ. ಹಸುವಿಗೆ ಡಿಕ್ಕಿ ಹೊಡೆಸಿದ ಕ್ಯಾಂಟ್ ವಾಹನದ ನಂ. ಕೆಎ-25-ಎ.ಎ-1139 ಆಗಿತ್ತು ಹಾಗೂ ಮೃತಪಟ್ಟ ಹಸುವಿನ ಬೆಲೆ ಸುಮಾರು ರೂ. 40,000/- ರಿಂದ 50,000/- ಆಗಿತ್ತು ಎಂದರೆ ಸರಿಯಲ್ಲ. ಈ ಕುರಿತು ನಾನು ದಿಃ 05.12.2015 ರಂದು ಪೊಲೀಸರಿಗೆ ಈಗ ಓದಿ ಹೇಳಿದಂತೆ ಹೇಳಿಕೆಯನ್ನು ಕೊಟ್ಟಿರುತ್ತೇನೆಂದರೆ ಸರಿಯಲ್ಲ. ಸಾಕ್ಷಿ ನಿರಾಕರಿಸಿದ ಹೇಳಿಕೆಯನ್ನು ನಿಪಿ-3 ಎಂದು ಗುರುತಿಸಲಾಯಿತು. ನಿಪಿ-3 ರಂತೆ ಹೇಳಿಕೆ ಕೊಟ್ಟಿದ್ದರು ಆರೋಪಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆಂದರೆ ಸರಿಯಲ್ಲ.

**<u>ಪಾಟೀ ಸವಾಲುಃ</u> ಆರೋಪಿತರ ಪರ ವಕೀಲರು ಇಲ್ಲ ಎಂದು ನುಡಿದಿರುತ್ತಾರೆ.**

**(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನ ರೀತ್ಯಾ ಬೆರಳಚ್ಚುಗಾರರಿಂದ ಗಣಕಯಂತ್ರದಲ್ಲಿ ಬೆರಳಚ್ಚು ಮಾಡಿಸಲಾಯಿತು)**

**ಓ ಹೇ ಕೇ ಸ ಅದೆ**

**ಅಪರ ಸಿವಿಲ್ ನ್ಯಾ. ಮತ್ತು**
**ಜೆ.ಎಂ.ಎಫ್.ಸಿ, ದೊಡ್ಡಬಳ್ಳಾಪುರ**